# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಕರ್ನಾಟಕ ವಿಕಾಸ ಮಾಸ ಪತ್ರಿಕೆಯನ್ನು 2015-16 ಮತ್ತು 2016-17ನೇ ಸಾಲಿಗೆ ಮುದ್ರಿಸಿ ಸರಬರಾಜು ಮಾಡುವ ಕುರಿತು.

**ಓದಲಾದ:** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅನುಮೋದಿಸಿದ ದಿನಾಂಕ:03.03.2015

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಕರ್ನಾಟಕ ವಿಕಾಸ ಪತ್ರಿಕೆಯನ್ನು ರಾಜ್ಯದ ಮೂರೂ ಹಂತದ ಪಂಚಾಯತಿಗಳು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನ ಸಂಸ್ಥೆಗಳ ಅಧಿಕಾರಿಗಳಿಗೆ ಹಾಗೂ ಸರ್ಕಾರದ ಪ್ರಮುಖ ಇಲಾಖೆಯ ಮುಖ್ಯಸ್ಥರಿಗೆ ಮತ್ತು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ತಲಾ ಒಂದು ಪ್ರತಿಯಂತೆ ಪತ್ರಿಕೆಯನ್ನು ಉಚಿತವಾಗಿ ರವಾನಿಸಲಾಗುತ್ತಿದೆ. ರಾಜ್ಯದ ಲೋಕಸಭಾ ಸದಸ್ಯರು, ರಾಜ್ಯ ಸಭಾ ಸದಸ್ಯರು, ವಿಧಾನ ಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಗೌರವ ಪ್ರತಿಗಳೂ ಹಾಗೂ ಚಂದಾದಾರರಿಗೆ ವಿತರಿಸಲು ಒಟ್ಟು 26000 ಪ್ರತಿಗಳನ್ನು 2015-16 ಮತ್ತು 2016-17ನೇ ಸಾಲಿಗೆ (ಮಾರ್ಚ್ 2017ರ ವರೆಗೆ) ಪತ್ರಿಕೆಯ ಅಳತೆ **1/4 Demi** ರಂತೆ ಒಳಪುಟಗಳನ್ನು 60 ಜಿಎಸ್‌ಎಂ ಮೆಕಾನಿಕಲ್ ಗ್ಲೇಸ್ಡ್ ಪೇಪರ್ ಮತ್ತು ರಕ್ಷಾ ಪುಟವನ್ನು 130 ಜಿಎಸ್‌ಎಂ ಇಂಡಿಯನ್ ಆರ್ಟ್ ಪೇಪರ್ ಲ್ಯಾಮಿನೇಷನ್‌ನೊಂದಿಗೆ ಮುದ್ರಿಸಿ ಸರಬರಾಜು ಮಾಡಲು ದಿನಾಂಕ:03.03.2015ರಂದು ಸದರಿ ವಿಷಯದ ಬಗ್ಗೆ ಪರಿಶೀಲಿಸಿ ಇಲಾಖೆಯ ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 09 ಕವಿ 2015 ದಿನಾಂಕ:25.03.2015**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಕರ್ನಾಟಕ ವಿಕಾಸ ಮಾಸ ಪತ್ರಿಕೆಯನ್ನು 2015-16 ಮತ್ತು 2016-17ನೇ ಸಾಲಿಗೆ 2 ವರ್ಷದ ಅವಧಿಗೆ (ಮಾರ್ಚ್ 2017ರ ವರೆಗೆ) ಪತ್ರಿಕೆಯ ಅಳತೆ **1/4 Demi** ರಂತೆ ಒಳಪುಟಗಳನ್ನು 60 ಜಿಎಸ್‌ಎಂ ಮೆಕಾನಿಕಲ್ ಗ್ಲೇಸ್ಡ್ ಪೇಪರ್ ಮತ್ತು ರಕ್ಷಾ ಪುಟವನ್ನು 130 ಜಿಎಸ್‌ಎಂ ಇಂಡಿಯನ್ ಆರ್ಟ್ ಪೇಪರ್ ಲ್ಯಾಮಿನೇಷನ್‌ನೊಂದಿಗೆ ಮುದ್ರಿಸಿ ಸರಬರಾಜು ಮಾಡಲು ಕೆ.ಟಿ.ಪಿ.ಪಿ ಅಧಿನಿಯಮದ ಪ್ರಕರಣ 11ರನ್ವಯ ಟೆಂಡರ್ ಅಂಗೀಕರಿಸುವ ಸಮಿತಿ ಪ್ರಾಧಿಕಾರವನ್ನು ಈ ಕೆಳಕಂಡಂತೆ ರಚಿಸಲಾಗಿದೆ.

| ಕ್ರ.ಸಂ | ಅಧಿಕಾರಿಯ ಪದನಾಮ | ಸ್ಥಾನಮಾನ |
|---|---|---|
| 1. | ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. | ಅಧ್ಯಕ್ಷರು. |
| 2. | ನಿರ್ದೇಶಕರು (ಪಂ.ರಾಜ್-1) ಹಾಗೂ ಪ್ರಕಾಶಕರು, ಕರ್ನಾಟಕ ವಿಕಾಸ, ಗ್ರಾಅಪ ಇಲಾಖೆ. | ಸದಸ್ಯರು |
| 3. | ನಿರ್ದೇಶಕರು (ಸುಗ್ರಾಯೋ) ಹಾಗೂ ಪ್ರಧಾನ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪ ಇಲಾಖೆ. | ಸದಸ್ಯರು. |
| 4. | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. | ಸದಸ್ಯರು |
| 5. | ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. | ಸದಸ್ಯ ಕಾರ್ಯದರ್ಶಿ. |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ್ ಮೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ.

1. ಮಹಾಲೇಖಾಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು.
2. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.
3. ಸಂಬಂಧಿಸಿದ ಅಧಿಕಾರಿಗಳಿಗೆ.

ಮು.ತಿ.ನೋ

**ಪ್ರತಿಗಳನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಸಲ್ಲಿಸಿದೆ.**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಇ-ಆಡಳಿತ), ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ (ಆಡಳಿತ ಸುಧಾರಣೆ), ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
7. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
8. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ,
9. ಆಯುಕ್ತರು, ಕರ್ನಾಟಕ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ, ಕಾವೇರಿ ಭವನ, ಬೆಂಗಳೂರು.
10. ಅಪರ ಕಾರ್ಯದರ್ಶಿ/ಉಪಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
11. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ.
12. ನಿರ್ದೇಶಕರು (ಸುಗ್ರಾಯೋ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
13. ಅಪರ ನಿರ್ದೇಶಕರು, ಸ್ವಚ್ಛ ಭಾರತ ಮಿಷನ್, ಕಾವೇರಿ ಭವನ, ಬೆಂಗಳೂರು.
14. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
15. ಸಂಪಾದಕರು, ಕರ್ನಾಟಕ ವಿಕಾಸ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
16. ವಿಶೇಷ ಅಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರಿಗೆ ಮಾಹಿತಿಗಾಗಿ ಹಾಗೂ ಸದರಿ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
17. ಹೆಚ್ಚುವರಿ ಪ್ರತಿ.